# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ನಡೆಯುತ್ತಿರುವ ವಸತಿ ಶಾಲೆಗಳನ್ನು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಮೇಲ್ವಿಚಾರಣಾ ಸಮಿತಿಯನ್ನು ರಚಿಸುವ ಬಗ್ಗೆ.

**ಓದಲಾಗಿದೆ.** ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು, ಇವರ ಪತ್ರ ಸಂಖ್ಯೆ: ಸಂಖ್ಯೆ:ಕವಶಿಸಸಂ/ ಶಿಕ್ಷಣ (1)/ ಸಿಆರ್-01/2020-21, ದಿನಾಂಕ:21-09-2020.

******

**ಪ್ರಸ್ತಾವನೆ:**

2020-21 ನೇ ಸಾಲಿನ ಆಯವ್ಯಯ ಕಂಡಿಕೆ-80 ರಲ್ಲಿ ಘೋಷಿಸಿದಂತೆ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆ / ಕಾಲೇಜುಗಳ ದಕ್ಷತೆ, ಶೈಕ್ಷಣಿಕ ಶ್ರೇಷ್ಠತೆ ಹಾಗೂ ವಸತಿ ಶಾಲೆ/ ಕಾಲೇಜುಗಳನ್ನು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಮೇಲ್ವಿಚಾರಣಾ ಸಮಿತಿಯನ್ನು ರಚಿಸುವ ಬಗ್ಗೆ ಸೂಕ್ತ ಆದೇಶ ಹೊರಡಿಸುವಂತೆ ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರು ಮೇಲೆ ಓದಲಾದ ಪತ್ರದಲ್ಲಿ ಕೋರಿರುತ್ತಾರೆ.

ಮೇಲ್ಕಂಡ ಅಂಶಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಕಇ 316 ಮೋಶಾ 2020,**
**ಬೆಂಗಳೂರು, ದಿನಾಂಕ: 16.10.2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆ / ಕಾಲೇಜುಗಳ ದಕ್ಷತೆ, ಶೈಕ್ಷಣಿಕ ಶ್ರೇಷ್ಠತೆಯೊಂದಿಗೆ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಅನುವಾಗುವಂತೆ ಈ ಕೆಳಕಂಡಂತೆ ಮೇಲ್ವಿಚಾರಣಾ ಸಮಿತಿಯನ್ನು ರಚಿಸಿ ಮಂಜೂರಾತಿ ನೀಡಿ ಆದೇಶಿಸಿದೆ.

| ಕ್ರ.ಸಂ | ವಿವರಗಳು | ಪದನಾಮ |
|---|---|---|
| 1. | ಜಿಲ್ಲಾಧಿಕಾರಿಗಳು | ಅಧ್ಯಕ್ಷರು |
| 2. | ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ | ಉಪಾಧ್ಯಕ್ಷರು |
| 3. | ಸಂಬಂಧಪಟ್ಟ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ | ಸದಸ್ಯರು |
| 4. | ಉಪ ನಿರ್ದೇಶಕರು (ಆಡಳಿತ)/ ಉಪ ನಿರ್ದೇಶಕರು (ಅಭಿವೃದ್ಧಿ), ಸಾರ್ವಜನಿಕ ಶಿಕ್ಷಣ ಇಲಾಖೆ | ಸದಸ್ಯರು |
| 5 | ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ | ಸದಸ್ಯರು |
| 6 | ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ | ಸದಸ್ಯರು |

| | | |
|---|---|---|
| 7 | ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ | ಸದಸ್ಯರು |
| 8 | ಜಿಲ್ಲಾಧಿಕಾರಿಗಳಿಂದ ನಾಮ ನಿರ್ದೇಶನ ಹೊಂದಿದ ಇಬ್ಬರು ಪಾಲಕರ ಪ್ರತಿನಿಧಿಗಳು (1 ಪುರುಷ, 1- ಮಹಿಳೆ) | ಸದಸ್ಯರು |
| 9 | ಜಿಲ್ಲಾಧಿಕಾರಿಗಳಿಂದ ನಾಮನಿರ್ದೇಶನ ಹೊಂದಿದ ಇಬ್ಬರು ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಪ್ರಾಂಶುಪಾಲರು | ಸದಸ್ಯರು |
| 10 | ಆಯಾ ಜಿಲ್ಲಾ ಸಮನ್ವಯ ಅಧಿಕಾರಿ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ | ಜಂಟಿ ಕಾರ್ಯದರ್ಶಿ |
| 11 | ಜಿಲ್ಲಾ ಜಂಟಿ ನಿರ್ದೇಶಕರು/ ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ. | ಸದಸ್ಯ ಕಾರ್ಯದರ್ಶಿಗಳು |

**ಈ ಮೇಲ್ವಿಚಾರಣಾ ಸಮಿತಿಯು ಈ ಕೆಳಕಂಡ ಕಾರ್ಯ/ ಕರ್ತವ್ಯಗಳನ್ನು ನಿರ್ವಹಿಸುವುದು:-**

1. ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಯ ಶೈಕ್ಷಣಿಕ ಬೆಳವಣಿಗೆ, ಮೂಲಭೂತ ಸೌಕರ್ಯಗಳ ಅಭಿವೃದ್ಧಿ, ಪಠ್ಯೇತರ ಚಟುವಟಿಕೆ, ವಸತಿ ಮತ್ತು ಉಟೋಪಚಾರ (ಮೆಸ್) ಇತ್ಯಾದಿ ಕಾರ್ಯನಿರ್ವಹಣೆ ಬಗ್ಗೆ ಮೇಲುಸ್ತುವಾರಿ ಮಾಡುವುದು.
2. ವಿದ್ಯಾರ್ಥಿಗಳ ಸರ್ವಾಂಗೀಣ ಬೆಳವಣಿಗೆಗೆ ಅಗತ್ಯ ಚಟುವಟಿಕೆಗಳು ಮತ್ತು ಕಾರ್ಯಕ್ರಮಗಳನ್ನು ಕಾಲಕಾಲಕ್ಕೆ ಹಮ್ಮಿಕೊಳ್ಳುವುದು.
3. ವಸತಿ ಶಾಲೆಯ ಅಭಿವೃದ್ಧಿಗೆ ಆರ್ಥಿಕ ಹಾಗೂ ಭೌತಿಕ ಸಂಪನ್ಮೂಲಗಳನ್ನು ಸ್ಥಳೀಯವಾಗಿ ಕ್ರೋಢೀಕರಿಸಲು ಕ್ರಮ ಕೈಗೊಳ್ಳುವುದು.
4. ವಸತಿ ಶಾಲೆಗಳ ಗುಣಮಟ್ಟದ ಶಿಕ್ಷಣವನ್ನು ಗಮನದಲ್ಲಿಟ್ಟುಕೊಂಡು ವಿವಿಧ ಸೌಲಭ್ಯ ಹಾಗೂ ಅನುಭವಗಳ ವಿನಿಯಮಯಕ್ಕಾಗಿ ಹಲವು ಚಟುವಟಿಕೆ/ ಕಾರ್ಯಕ್ರಮಗಳನ್ನು ವ್ಯವಸ್ಥೆ ಮಾಡುವುದು.
5. ಶಾಲೆಯ ಮೂಲಭೂತ ಬೆಳವಣಿಗೆಯ ಪರಿವೀಕ್ಷಣೆ ಮಾಡುವುದು.
6. ವಸತಿ ಶಾಲೆಯ ಸರ್ವಾಂಗೀಣ ಅಭಿವೃದ್ಧಿಯ ಹಿತದೃಷ್ಟಿಯಿಂದ ಅಗತ್ಯ ಸಲಹೆ ಸೂಚನೆಗಳನ್ನು ನೀಡುವುದು.
7. ವಸತಿ ಶಾಲೆಗಳ ಬೆಳವಣಿಗೆ ಮತ್ತು ಉತ್ತಮ ಕಾರ್ಯನಿರ್ವಹಣೆಗೆ ಸ್ಥಳೀಯರ ಸಹಕಾರ ಪಡೆಯಲು ಕ್ರಮವಹಿಸುವುದು.
8. ವಸತಿ ಶಾಲೆಯ ನಿರ್ವಹಣೆ ಹಾಗೂ ಶಾಲೆಯ ಶೈಕ್ಷಣಿಕ ಅಭಿವೃದ್ಧಿ ಬಗ್ಗೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘಕ್ಕೆ ಸಲಹೆಗಳನ್ನು ನೀಡುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 372/ ವೆಚ್ಚ-3/ 2020, ದಿನಾಂಕ:01-10-2020 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

16/X/2020
(ಪಿ.ಎನ್. ನಾಗರಾಜ್)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

<u>ಇವರಿಗೆ,</u>

1. ಮಹಾಲೇಖಪಾಲರು, (ಲೆಕ್ಕಪತ್ರ/ಲೆಕ್ಕ ಪರಿಶೋಧನೆ) ಕರ್ನಾಟಕ, ಬೆಂಗಳೂರು.

2. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು.
3. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
4. ಎಲ್ಲಾ ಜಿಲ್ಲೆಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್.
5. ಎಲ್ಲಾ ಜಿಲ್ಲೆಗಳ ಜಂಟಿ/ ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ.
6. ಎಲ್ಲಾ ಜಿಲ್ಲೆಗಳ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು.
7. ಎಲ್ಲಾ ಜಿಲ್ಲೆಗಳ ಉಪ ನಿರ್ದೇಶಕರು (ಆಡಳಿತ)/ ಉಪ ನಿರ್ದೇಶಕರು (ಅಭಿವೃದ್ಧಿ), ಸಾರ್ವಜನಿಕ ಶಿಕ್ಷಣ ಇಲಾಖೆ.
8. ಎಲ್ಲಾ ಜಿಲ್ಲೆಗಳ ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ.
9. ಎಲ್ಲಾ ಜಿಲ್ಲೆಗಳ ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.
10. ಎಲ್ಲಾ ಜಿಲ್ಲೆಗಳ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ.
11. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಂದ ನಾಮ ನಿರ್ದೇಶನ ಹೊಂದಿದ ಇಬ್ಬರು ಪಾಲಕರ ಪ್ರತಿನಿಧಿಗಳು (1 ಪುರುಷ, 1- ಮಹಿಳೆ)
12. ಎಲ್ಲಾ ಜಿಲ್ಲೆಗಳ ಆಯಾ ಜಿಲ್ಲಾ ಸಮನ್ವಯ ಅಧಿಕಾರಿ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ.
13. ಶಾಖಾ ರಕ್ಷಾ ಕಡತ.

(ಕ್ರ.ಸಂಖ್ಯೆ: (3) ರಿಂದ (12) ರವರೆಗೆ ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಮೂಲಕ ಅಗತ್ಯ ಕ್ರಮಕ್ಕಾಗಿ ಕಳುಹಿಸುವುದು.)

**ಪ್ರತಿ ಮಾಹಿತಿಗಾಗಿ**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ.
2. ಸರ್ಕಾರದ ಉಪ ಕಾರ್ಯದರ್ಶಿ-2, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕ, ವಿಕಾಸಸೌಧ.